# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 152 |
| ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಎ.ಎಂ ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10.07.2018. |
| ಉತ್ತರಿಸುವ ಸಚಿವರು | : | ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ, ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಹಾಗೂ ಹಜ್ ಇಲಾಖಾ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಪಡಿತರ ಚೀಟಿಗಳನ್ನು ನಿಯಮಿತವಾಗಿ ವಿತರಣೆ ಮಾಡುವುದರಿಂದ ಹಾಗೂ ವ್ಯವಸ್ಥಿತವಾಗಿ ಬಯೋ-ಮೆಟ್ರಿಕ್ ತಂತ್ರಾಂಶವನ್ನು ಅಳವಡಿಸದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದಾಗಿ ಅರ್ಹ ಫಲಾನುಭವಿಗಳಿಗೆ ಪಡಿತರ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಮುಂತಾದ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು:</td><td>ರಾಜ್ಯದಲ್ಲಿ ಸಂಪೂರ್ಣ ಪಾರದರ್ಶಕವಾಗಿ ಪಡಿತರ ಚೀಟಿಗಳನ್ನು ವಿತರಿಸಬೇಕೆಂಬ ಉದ್ದೇಶದಿಂದ ಪಡಿತರ ಚೀಟಿ ವಿತರಣೆ ಕಾರ್ಯವನ್ನು ಸಂಪೂರ್ಣವಾಗಿ ಗಣಕೀಕರಣಗೊಳಿಸಿ ಆನ್‌ಲೈನ್ ಮೂಲಕ ಜಾರಿಗೊಳಿಸಲಾಗಿದೆ ಹಾಗೂ ಫಲಾನುಭವಿಗಳನ್ನು ಆಧಾರ್ ಜೋಡಣೆ ಮೂಲಕವೇ ಗುರುತಿಸುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ.<br><br>2017 ರಿಂದ 28.03.2018ರವರೆಗೆ ಹೊಸ ಪಡಿತರ ಚೀಟಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗಿದೆ. ದಿನಾಂಕ:28.03.2018 ರವರೆಗೆ 27,92,143 ಆದ್ಯತಾ (ಪಿ.ಹೆಚ್.ಹೆಚ್) ಪಡಿತರ ಚೀಟಿಗಾಗಿ ಅರ್ಜಿಗಳು ಸ್ವೀಕೃತವಾಗಿದ್ದು, ಈ ಅರ್ಜಿಗಳ ಪೈಕಿ 17,07,998 ಪಡಿತರ ಚೀಟಿಗಳನ್ನು ವಿತರಿಸಲಾಗಿದೆ ಹಾಗೂ 2,10,684 ಆದ್ಯತೇತರ (ಎನ್.ಪಿ.ಹೆಚ್.ಹೆಚ್) ಪಡಿತರ ಚೀಟಿಗಾಗಿ ಅರ್ಜಿಗಳು ಸ್ವೀಕೃತವಾಗಿದ್ದು, ಈ ಅರ್ಜಿಗಳ ಪೈಕಿ 56,067 ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.<br><br>ಚುನಾವಣಾ ನೀತಿ ಸಂಹಿತೆಯನ್ವಯ ಹೊಸ ಪಡಿತರ ಚೀಟಿ ಪಡೆಯುವ ಹಾಗೂ ಸ್ವೀಕೃತ ಅರ್ಜಿಗಳನ್ನು ಪರಿಶೀಲಿಸುವ ಕಾರ್ಯವನ್ನು ಸ್ಥಗಿತಗೊಳಿಸಲಾಗಿತ್ತು. ಈ ಸಂದರ್ಭದಲ್ಲಿ ಜನರಿಗೆ ತೊಂದರೆಯಾಗಿರುವುದನ್ನು ಗಮನಿಸಲಾಗಿದ್ದು, ಆನ್‌ಲೈನ್ ವ್ಯವಸ್ಥೆಯನ್ನು ಪುನಃ ಜಾರಿಗೊಳಿಸಲಾಗಿದೆ.</td></tr>
<tr><td>ಆ)</td><td>ಅರ್ಹ ಫಲಾನುಭವಿಗಳಿಗೆ ಹೊಸದಾಗಿ ಪಡಿತರ ಚೀಟಿಗಳನ್ನು ವಿತರಣೆ ಮಾಡಲು ಸರ್ಕಾರ ಕಾಲಮಿತಿಯೇನಾದರೂ ನಿಗಧಿಪಡಿಸಿದೆಯೇ; ಹಾಗಿದ್ದಲ್ಲಿ ಯಾವಾಗ ವಿತರಣೆ ಮಾಡಲಾಗುವುದು:</td><td>ಹೊಸ ಪಡಿತರ ಚೀಟಿ ವ್ಯವಸ್ಥೆಯನ್ನು "ಸಕಾಲ" ದಲ್ಲಿ ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ. ಇದಕ್ಕೂ ಮುನ್ನ ಚುನಾವಣೆ ನೀತಿ ಸಂಹಿತೆ ವೇಳೆಯಲ್ಲಿ ಬಾಕಿ ಉಳಿದಿರುವ 9,84,110 ಅರ್ಜಿಗಳನ್ನು ಆದ್ಯತೆ ಮೇರೆಗೆ ವಿಲೇವಾರಿ ಮಾಡಲು ಕ್ರಮವಹಿಸಲಾಗುವುದು.</td></tr>
<tr><td>ಇ)</td><td>ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದಲ್ಲಿ ಹೊಸದಾಗಿ ಬಿ.ಪಿ.ಎಲ್., ಎ.ಪಿ.ಎಲ್ ಹಾಗೂ ಅಂತ್ಯೋದಯ ಪಡಿತರ ಚೀಟಿಗಳಿಗೆ ಅರ್ಜಿ ಸಲ್ಲಿಸಿದ್ದವರ ಸಂಖ್ಯೆ ಎಷ್ಟು; ಪಡಿತರ ಚೀಟಿಗಳನ್ನು ವಿತರಣೆ ಮಾಡಲು ಸ್ಥಳ ತನಿಖೆ ಮಾಡಲಾಗಿದೆಯೇ; ಮಾಡಿದಿದ್ದಲ್ಲಿ</td><td><table><tr><th>ವಿವರ</th><th>ಎಎವೈ</th><th>ಪಿ.ಹೆಚ್.ಹೆಚ್</th><th>ಎನ್.ಪಿ.ಹೆಚ್.ಹೆಚ್</th><th>ಒಟ್ಟು</th></tr><tr><td>ಅರ್ಜಿ ಸಲ್ಲಿಸಿದವರ ಸಂಖ್ಯೆ</td><td>ಇಲ್ಲ</td><td>5358</td><td>534</td><td>5892</td></tr><tr><td>ಪಡಿತರ ಚೀಟಿ ವಿತರಣೆ ಮಾಡಿರುವುದು.</td><td>ಇಲ್ಲ</td><td>3644</td><td>534</td><td>4178</td></tr></table></td></tr>
</table>

<table>
<tr>
<td></td>
<td>ಕಾರಣಗಳೇನು: (ವಿವರ ನೀಡುವುದು).</td>
<td>
<table>
<tr><td>ಪಡಿತರ ಚೀಟಿ ವಿತರಿಸಲು ಬಾಕಿ ಇರುವುದು</td><td>ಇಲ್ಲ</td><td>1714</td><td>0</td><td>1714</td></tr>
</table>
ಕಂದಾಯ ಇಲಾಖೆಯಿಂದ ಆದಾಯ ಪ್ರಮಾಣ ಪತ್ರದ ವಿವರಗಳನ್ನು ಆನ್‌ಲೈನ್ ಮೂಲಕ ಪಡೆದು ಪಡಿತರ ಚೀಟಿಗಳ ವಿಲೇವಾರಿ ಮಾಡಲಾಗಿದೆ ಹಾಗೂ ತಕ್ಷಣ ಪಡಿತರ ಚೀಟಿ ವಿಶೇಷ ಯೋಜನೆಯಡಿ ಕೂಡ ಫಲಾನುಭವಿಗಳಿಗೆ ಸ್ಥಳದಲ್ಲೇ ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರದಲ್ಲಿ ಇದುವರೆಗೆ ಒಟ್ಟು 4,178 ಪಡಿತರ ಚೀಟಿಗಳನ್ನು ವಿತರಿಸಲಾಗಿದೆ. ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದ ಕಾರಣದಿಂದಾಗಿ 1,714 ಅರ್ಜಿಗಳ ವಿಲೇವಾರಿ ಸ್ಥಗಿತಗೊಳಿಸಲಾಗಿತ್ತು. ಈಗ ಪುನಃ ಇವುಗಳನ್ನು ಪರಿಶೀಲಿಸಿ ವಿಲೇವಾರಿ ಮಾಡಲು ಕ್ರಮ ವಹಿಸಲಾಗುವುದು.
</td>
</tr>
</table>

ಆನಾಸ 150 ಡಿಆರ್ಎ 2018

(ಬಿ. ಜೆಡ್. ಜಮೀರ್ ಅಹ್ಮದ್ ಖಾನ್)
ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ
ಹಾಗೂ ಕಾನೂನು ಮಾಪನಶಾಸ್ತ್ರ, ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು
ವಕ್ಫ್ ಹಾಗೂ ಹಜ್ ಇಲಾಖಾ ಸಚಿವರು